# Bangalore
# Regional News
# 09.01.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಯುವನಿಧಿ ಯೋಜನೆಯ ನೋಂದಣಿದಾರರಿಗೆ ಕೌಶಲ್ಯ ತರಬೇತಿಯಲ್ಲಿ ಆದ್ಯತೆ ನೀಡಲು ಮುಖ್ಯಮಂತ್ರಿ ಸೂಚನೆ
2. ಬಂಡೀಪುರದಲ್ಲಿ ರಾತ್ರಿ ವಾಹನ ಸಂಚಾರಕ್ಕೆ ಯಾವುದೇ ಹೊಸ ಅನುಮತಿ ನೀಡಿಲ್ಲ – ಅರಣ್ಯ ಸಚಿವ ಈಶ್ವರ್ ಖಂಡ್ರೆ ಸ್ಪಷ್ಟನೆ
3. ರಾಜ್ಯ ಸರ್ಕಾರದಿಂದ ಗಣಿಗಾರಿಕೆಗೆ ಹೆಚ್ಚುವರಿ ತೆರಿಗೆ ವಿಚಾರ; ಕೇಂದ್ರ ಕಾನೂನು ಸಚಿವರ ಜೊತೆ ಎಚ್.ಡಿ.ಕುಮಾರಸ್ವಾಮಿ ಚರ್ಚೆ
4. ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ನಟ ಕಿಶೋರ್ ರಾಯಭಾರಿಯಾಗಿ ನೇಮಕ
5. ಮಾರ್ಚ್ ಅಂತ್ಯದೊಳಗೆ ಪೌರಕಾರ್ಮಿಕರಿಗೆ ನೇಮಕಾತಿ ಆದೇಶ – ಬಿಬಿಎಂಪಿ ಆಯುಕ್ತ ತುಷಾರ್ ಗಿರಿನಾಥ್

*****************

ಮುಖ್ಯಮಂತ್ರಿ ಸಿದ್ಧರಾಮಯ್ಯ ಅಧ್ಯಕ್ಷತೆಯಲ್ಲಿ ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಪ್ರಗತಿ ಪರಿಶೀಲನೆ ಸಭೆ ನಡೆಯಿತು.

ಪ್ರಸ್ತುತ ಬಜೆಟ್‌ನಲ್ಲಿ ಇಲಾಖೆಗೆ 1 ಸಾವಿರದ 864 ಕೋಟಿ ಅನುದಾನ ಹಂಚಿಕೆ ಮಾಡಲಾಗಿದ್ದು, ಇದುವರೆಗೆ ರೂಪಾಯಿ 1 ಸಾವಿರದ 235 ಕೋಟಿ ವೆಚ್ಚವಾಗಿದೆ. ಕೌಶಲ್ಯಾಭಿವೃದ್ಧಿ ಆದರೆ ಮಾತ್ರ ಉದ್ಯೋಗ ಸಿಗಲು ಸಾಧ್ಯವಿದೆ. ಕೌಶಲ್ಯ ನೀಡಿಕೆ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಅನುಷ್ಠಾನಗೊಳಿಸಬೇಕು ಎಂದು ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚಿಸಿದ್ದಾರೆ. ಯುವನಿಧಿ ಯೋಜನೆಯಡಿ ನೋಂದಣಿ ಮಾಡಿಕೊಂಡವರಿಗೆ ಆದ್ಯತೆ ಮೇರೆಗೆ ಕೌಶಲ್ಯ ತರಬೇತಿ ನೀಡಬೇಕು ಎಂದು ತಿಳಿಸಿದ್ದಾರೆ.

ಯುವನಿಧಿ ಯೋಜನೆಯಡಿ ಇದುವರೆಗೆ 1 ಲಕ್ಷದ 97 ಸಾವಿರದ 60 ಅಭ್ಯರ್ಥಿಗಳು ನೋಂದಾಯಿಸಿದ್ದು, ಇವರ ಪೈಕಿ 1 ಲಕ್ಷದ 61 ಸಾವಿರದ 883 ಅರ್ಹ ಫಲಾನುಭವಿಗಳಿಗೆ 216 ಕೋಟಿ 38 ಲಕ್ಷ ನಿರುದ್ಯೋಗ ಭತ್ಯೆ ನೀಡಲಾಗಿದೆ.

20ಸಾವಿರ ಐಟಿಐ ವಿದ್ಯಾರ್ಥಿಗಳಿಗೆ ಇಂಗ್ಲಿಷ್ ಮತ್ತು ಕಮ್ಯುನಿಕೇಶನ್ ಕೌಶಲ್ಯ ತರಬೇತಿ ನೀಡುವ ಕಾರ್ಯಕ್ರಮವನ್ನು ಆದಷ್ಟು ಬೇಗನೆ ಅನುಷ್ಠಾನಗೊಳಿಸಬೇಕು. ಐಟಿಐ ಪ್ರವೇಶಾತಿಯನ್ನು ಹೆಚ್ಚಿಸಲು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದ್ದಾರೆ.

*****************

ತಾವು ಸಚಿವರಾದ ಮೇಲೆ ಬಂಡೀಪುರದಲ್ಲಿ ರಾತ್ರಿ ಸಂಚಾರಕ್ಕೆ ಯಾವುದೇ ಹೊಸ ಅನುಮತಿ ನೀಡಿಲ್ಲ ಎಂದು ಅರಣ್ಯ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಗರುಡಾಕ್ಷಿ –ಆನ್ಲೈನ್ ಎಫ್‌ಐಆರ್ ಉದ್ಘಾಟನೆ ವೇಳೆ ಮಾತನಾಡಿದ ಅವರು, ಹಲವು ವರ್ಷಗಳಿಂದ ರಾತ್ರಿ 9 ರವರೆಗೆ ಬಂಡೀಪುರ ಮತ್ತು ವಯನಾಡು ನಡುವೆ ರಾತ್ರಿ ಬಸ್ ಸಂಚರಿಸುತ್ತಿದೆ ಎಂದು ತಿಳಿಸಿದ್ದಾರೆ. ಇದಲ್ಲದೆ ಆಂಬುಲೆನ್ಸ್ ಹಾಗೂ ಆರೋಗ್ಯ ನಿಮಿತ್ತ ತುರ್ತು ವಾಹನಗಳ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿಯೂ ರಾತ್ರಿ ಬಸ್ ಸೇವೆ ಇತ್ತು ಎಂದು ಹೇಳಿದ್ದಾರೆ.

ಬಿಜೆಪಿ ನಾಯಕರು ಸುಳ್ಳು ಸುದ್ದಿ ಹಬ್ಬಿಸುತ್ತಾ ರಾಜ್ಯದ ಜನರಲ್ಲಿ ಗೊಂದಲ ಮೂಡಿಸುತ್ತಿದ್ದಾರೆ ಎಂದು ದೂರಿದ್ದಾರೆ.

*****************

ಕರ್ನಾಟಕ ಸರ್ಕಾರ ಗಣಿಗಾರಿಕೆ ಮೇಲೆ ಹೆಚ್ಚುವರಿ ತೆರಿಗೆ ವಿಧಿಸುತ್ತಿರುವ ಹಿನ್ನೆಲೆಯಲ್ಲಿ ಸಾಧಕ-ಬಾಧಕಗಳ ಕುರಿತು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ, ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘ್ವಾಲ್ ಅವರೊಂದಿಗೆ ಸಮಾಲೋಚನೆ ನಡೆಸಿದರು. ದೆಹಲಿಯಲ್ಲಿಂದು ನಡೆದ ಸಭೆಯಲ್ಲಿ ಉಕ್ಕು ಸಚಿವಾಲಯದ ಕಾರ್ಯದರ್ಶಿ ಸಂದೀಪ್ ಪೌಂಡ್ರಿಕ್, ರಾಷ್ಟ್ರೀಯ ಖನಿಜಾಭಿವೃದ್ಧಿ ನಿಗಮದ ಅಧ್ಯಕ್ಷ ಅಮಿತೌ ಮುಖರ್ಜಿ, ಕಾನೂನು ಸಚಿವಾಲಯ ಹಾಗೂ ಗಣಿ ಕಂಪನಿಗಳ ಉನ್ನತಾಧಿಕಾರಿಗಳು ಉಪಸ್ಥಿತರಿದ್ದರು.

ಸಭೆಯಲ್ಲಿ ಕುಮಾರಸ್ವಾಮಿ 2030ರ ವೇಳೆಗೆ ಭಾರತ ವಾರ್ಷಿಕ 300 ದಶಲಕ್ಷ ಟನ್ ಉಕ್ಕು ಉತ್ಪಾದನೆ ಮಾಡುವ ಗುರಿ ಹೊಂದಿದೆ. ಮಹತ್ವಾಕಾಂಕ್ಷೆಯ ಗುರಿಯನ್ನು ತಲುಪಲು ಉಕ್ಕು ಮತ್ತು ಗಣಿ ಕ್ಷೇತ್ರದಲ್ಲಿರುವ ಅಡೆತಡೆಗಳನ್ನು ನಿವಾರಿಸಬೇಕಾಗಿದೆ ಎಂದರು.

ಕರ್ನಾಟಕ ಸರ್ಕಾರ ಹೆಚ್ಚುವರಿ ತೆರಿಗೆ ವಿಧಿಸುತ್ತಿರುವ ಪರಿಣಾಮ ದೇಶೀಯ ಗಣಿ ಮತ್ತು ಉಕ್ಕು ಉದ್ಯಮದ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ. ಸಚಿವ ಅರ್ಜುನ್ ರಾಮ್ ಮೇಘ್ವಾಲ್ ಮಾತನಾಡಿ, ಪ್ರಧಾನಿ ಅವರ ಕನಸನ್ನು ನನಸು ಮಾಡಬೇಕಾದರೆ ಒಮ್ಮತದ ಹೆಜ್ಜೆಗಳನ್ನು ಇಡುವ ಅಗತ್ಯವಿದೆ ಎಂದು ಹೇಳಿದ್ದಾರೆ.

*****************

16ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ರಾಯಭಾರಿಯನ್ನಾಗಿ ಖ್ಯಾತ ನಟ ಕಿಶೋರ್ ಕುಮಾರ್ ಜಿ ಅವರನ್ನು ಆಯ್ಕೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

ಕಿಶೋರ್ ಹಿಂದಿ ಹಾಗೂ ದಕ್ಷಿಣ ಭಾರತದ ಎಲ್ಲಾ ಭಾಷೆಗಳಲ್ಲೂ ನಟಿಸಿ ಜನಪ್ರಿಯತೆಗಳಿಸಿದ್ದಾರೆ. ಮಾರ್ಚ್ ಒಂದರಿಂದ 8 ರವರೆಗೆ ಬೆಂಗಳೂರಿನಲ್ಲಿ ಸರ್ವಜನಾಂಗದ ಶಾಂತಿಯ ತೋಟ ಶಿರ್ಷಿಕೆಯಡಿ ಚಲನಚಿತ್ರೋತ್ಸವ ನಡೆಯಲಿದೆ.

ಸುಮಾರು 60 ದೇಶಗಳ ಸಿನಿಮಾಗಳು ಚಿತ್ರೋತ್ಸವದಲ್ಲಿ ಭಾಗವಹಿಸಲಿವೆ. ನಟ ರಾಯಬಾರಿಯಾಗಿ ನೇಮಕಗೊಂಡಿರುವ ನಟ ಕಿಶೋರ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದನೆ ಸಲ್ಲಿಸಿದ್ದಾರೆ.

*****************

ಬಿಬಿಎಂಪಿ ವ್ಯಾಪ್ತಿಯ ಪೌರಕಾರ್ಮಿಕರ ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆ ಮಾಡಿರುವ ಪೌರಕಾರ್ಮಿಕರಿಗೆ ಮಾರ್ಚ್ 2025ರ ಅಂತ್ಯದೊಳಗಾಗಿ ನೇಮಕಾತಿ ಆದೇಶ ನೀಡಲಾಗುವುದೆಂದು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ.

ಪೌರಕಾರ್ಮಿಕರ ಪಿತಾಮಹ ಐ.ಪಿ.ಡಿ ಸಾಲಪ್ಪ ಅವರ ಜನ್ಮ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಪೊಲೀಸ್ ತಪಾಸಣೆ ಹಾಗೂ ಮೀಸಲಾತಿ ಪ್ರಮಾಣ ಪತ್ರಗಳ ಸಿಂಧುತ್ವ ಕಾರ್ಯ ನಡೆಯುತ್ತಿದ್ದು, ಪ್ರಕ್ರಿಯೆಯನ್ನು ಮಾರ್ಚ್ 2025ರ ಅಂತ್ಯದೊಳಗಾಗಿ ಪೂರ್ಣಗೊಳಿಸಲಾಗುವುದು ಎಂದು ಹೇಳಿದ್ದಾರೆ.

ತಂತ್ರಜ್ಞಾನ ಎಷ್ಟೇ ಬೆಳೆದಿದ್ದರೂ ಪೌರಕಾರ್ಮಿಕರು ಇನ್ನು ಪೊರಕೆಯಿಂದಲೇ ಬೀದಿಗಳನ್ನು ಸ್ವಚ್ಛ ಮಾಡುತ್ತಿದ್ದು ಈ ನಿಟ್ಟಿನಲ್ಲಿ ಪೌರಕಾರ್ಮಿಕರಿಗೆ ಶೀಘ್ರ ಯಾಂತ್ರಿಕೃತ ಯಂತ್ರ ನೀಡಲು ಕ್ರಮ ಕೈಗೊಳ್ಳಲಾಗುವುದೆಂದು ಸ್ಪಷ್ಟಪಡಿಸಿದ್ದಾರೆ.

*****************

ಬಹು ಅಂಗಾಗ ವೈಫಲ್ಯದಿಂದ ಶಿವಮೊಗ್ಗ ಜಿಲ್ಲೆಯ ತ್ಯಾವರೆಕೊಪ್ಪದ ಹುಲಿ ಮತ್ತು ಸಿಂಹಧಾಮದ ವ್ಯಾಘ್ರ ಅಂಜನಿ ಮೃತಪಟ್ಟಿದೆ ಎಂದು ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕ ಅಮರಾಕ್ಷರ ತಿಳಿಸಿದ್ದಾರೆ.

ವಯೋ ಸಹಜ ಬಹು ಅಂಗಾಂಗ ವೈಫಲ್ಯದಿಂದ ಮೃತಪಟ್ಟಿದೆ ಎಂದು ವೈದ್ಯಾಧಿಕಾರಿಗಳು ತಿಳಿಸಿದ್ದಾರೆ. ಪಶುವೈದ್ಯಕೀಯ ಕಾಲೇಜಿನ ವೈದ್ಯಾಧಿಕಾರಿಗಳು ಮರಣೋತ್ತರ ಪರೀಕ್ಷೆ ನಡೆಸಿದ್ದಾರೆ. ಅಂಜನಿ ಸಾವಿನಿಂದ ಮೃಗಾಲಯದಲ್ಲಿ ಹೆಣ್ಣು ಹುಲಿಗಳ ಸಂಖ್ಯೆ 4ಕ್ಕೆ ಇಳಿಕೆಯಾಗಿದೆ.

*****************

ಕ್ಷಯಮುಕ್ತ ಭಾರತ ನಿರ್ಮಾಣ ಸಾರ್ವಜನಿಕ ಜವಾಬ್ದಾರಿಯಾಗಲಿ ಎಂದು ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ ತಿಳಿಸಿದ್ದಾರೆ.

ರಾಷ್ಟ್ರೀಯ ಕ್ಷಯ ರೋಗ ನಿರ್ಮೂಲನಾ ಕಾರ್ಯಕ್ರಮದ ಅಂಗವಾಗಿ 100 ದಿನಗಳ ಪ್ರಚಾರ ಆಂದೋಲನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಎಲ್ಲಾ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಕ್ಷಯರೋಗ ಪತ್ತೆ ಚಿಕಿತ್ಸೆ ಉಚಿತವಾಗಿದೆ. ಎಲ್ಲರೂ ಒಗ್ಗೂಡಿ ಕ್ಷಯರೋಗದ ವಿರುದ್ಧ ಹೋರಾಟ ನಡೆಸಿ ಚಿತ್ರದುರ್ಗ ಜಿಲ್ಲೆಯನ್ನ ಕ್ಷಯ ಮುಕ್ತ ಜಿಲ್ಲೆಯನ್ನಾಗಿಸೋಣ ಎಂದು ಕರೆ ನೀಡಿದರು.

*****************

ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷ ಟಿ.ಶ್ಯಾಮ್ ಭಟ್ ಹಾಗೂ ನ್ಯಾಯಾಂಗ ಸದಸ್ಯ ಎಸ್.ಕೆ.ವಂಟಿಗೋಡಿ ಅವರು ಇಂದು ಬಳ್ಳಾರಿ ಸೆಂಟ್ರಲ್ ಜೈಲಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಜೈಲಿನಲ್ಲಿ ಕೈದಿಗಳಿಗೆ ನೀಡಿರುವ ವ್ಯವಸ್ಥೆ ಬಗ್ಗೆ ಮಾಹಿತಿ ಪಡೆದ ಅವರು, ಅಡುಗೆ ಮನೆಗೆ ತೆರಳಿ ಅಲ್ಲಿ ಸಿದ್ದಪಡಿಸಿದ್ದ ಆಹಾರವನ್ನು ಪರೀಕ್ಷಿಸಿದರು. ಬಳಿಕ ಜೈಲಿನ ಬ್ಯಾರಕ್‌ಗಳನ್ನು ಅವರು ಪರಿಶೀಲಿಸಿದರು.

*****************

ಸ್ವಚ್ಛ ಭಾರತ್ ಮಿಷನ್ ಮತ್ತು ಹದಿನೈದನೇ ಹಣಕಾಸು ಯೋಜನೆಯಡಿ ದಾವಣಗೆರೆಯಲ್ಲಿ ನಿರ್ಮಾಣ ಮಾಡಿರುವ ದೇಶದ ಮೂರನೇ ಸ್ವಚ್ಛ ಗೃಹ ಕಲಿಕಾ ಕೇಂದ್ರವನ್ನು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಲೋಕಾರ್ಪಣೆಗೊಳಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಒಂದು ಕೋಟಿ 6 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣ ಮಾಡಿರುವ ಈ ಕೇಂದ್ರವನ್ನು ಆಂಧ್ರಪ್ರದೇಶ ಹಾಗೂ ಬೆಂಗಳೂರಿನಲ್ಲಿ ಹೊರತುಪಡಿಸಿದರೆ ದಾವಣಗೆರೆಯಲ್ಲಿ ನಿರ್ಮಾಣವಾಗಿರುವುದು ಹೆಗ್ಗಳಿಕೆಯಾಗಿದೆ ಎಂದರು.

ಧ್ವನಿ: ಪ್ರಭಾ ಮಲ್ಲಿಕಾರ್ಜುನ್

*****************

ಮಂಗನ ಕಾಯಿಲೆ-ಕೆಎಫ್‌ಡಿ ಕುರಿತು ಎಲ್ಲ ಪಂಚಾಯತ್‌ಗಳಲ್ಲಿ ಅರಿವು ಮೂಡಿಸಬೇಕು. ಹಾಗೂ ಮಲೆನಾಡಿನ ಭಾಗದಲ್ಲಿ ಜನರು ಕಾಡಿಗೆ ಹೋಗುವ ವೇಳೆ ಉಣ್ಣೆಗಳಿಂದ ರಕ್ಷಣೆ ಪಡೆಯಲು ಅಗತ್ಯವಾದ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಸಲಹೆ ನೀಡಿದ್ದಾರೆ.

ಆರೋಗ್ಯ ಇಲಾಖೆಯ ವಿವಿಧ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಪ್ರಸಕ್ತ ಸಾಲಿನಲ್ಲಿ ಯಾವುದೇ ಕೆಎಫ್‌ಡಿ ಪ್ರಕರಣಗಳು ವರದಿಯಾಗಿಲ್ಲ. ಆದರೆ ರೋಗ ಲಕ್ಷಣಗಳಿದ್ದಲ್ಲಿ ಪರೀಕ್ಷೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಸಾಗರ, ಸೊರಬ, ತೀರ್ಥಹಳ್ಳಿ, ಹೊಸನಗರ ತಾಲ್ಲೂಕುಗಳಲ್ಲಿ ಇಲಾಖೆಯಿಂದ ಡೇಪಾ ತೈಲ ನೀಡಲಾಗಿದೆ. ಸಾರ್ವಜನಿಕರು ಕಾಡಿಗೆ ಹೋಗುವ ಮುನ್ನ ಇದನ್ನು ಕೈ ಕಾಲುಗಳಿಗೆ ಲೇಪಿಸಿಕೊಂಡು ಹೋಗಬೇಕು ಎಂದು ಹೇಳಿದ್ದಾರೆ.

*****************

ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಬಂಧನಕ್ಕೆ ಒಳಗಾದ ಪ್ರಜ್ವಲ್ ರೇವಣ್ಣ ಅವರಿಗೆ ಹೈಕೋರ್ಟ್ ತಾತ್ಕಾಲಿಕ ಪರಿಹಾರ ನೀಡಿದೆ.

ಪ್ರಕರಣ ರದ್ದು ಕೋರಿ ಪ್ರಜ್ವಲ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಲಯ ಆರೋಪ ನಿಗದಿ ಮಾಡದಂತೆ ಹೈಕೋರ್ಟ್ ನ್ಯಾಯಮೂರ್ತಿ.ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠ ತಡೆ ನೀಡಿದೆ.

ಮುಂದಿನ ಆದೇಶದ ವರೆಗೆ ಆರೋಪ ನಿಗದಿ ಮಾಡದಂತೆ ಸೂಚನೆ ನೀಡಿ ಇದೇ 16ಕ್ಕೆ ವಿಚಾರಣೆ ಮುಂದೂಡಿದೆ.

*****************

ಸಂಕ್ಷಿಪ್ತ ಸುದ್ದಿಗಳು

**1.** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಒಲಿಂಪಿಕ್ ಸಂಸ್ಥೆಯ ನೇತೃತ್ವದಲ್ಲಿ ಕರ್ನಾಟಕ ಕ್ರೀಡಾಕೂಟವನ್ನು ಇದೇ **17** ರಿಂದ **23**ರವರೆಗೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಆಯೋಜಿಸಲಾಗಿದೆ ಎಂದು ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ.

**2.** ಯಾದಗಿರಿ ಜಿಲ್ಲೆಯ ಶಹಾಪುರ ನಗರದ ರಸ್ತೆಗಳ ವಿಸ್ತರಣೆಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ಕೆಕೆಆರ್‌ಡಿಬಿ ಅನುದಾನದಲ್ಲಿ ಹೆಚ್ಚಿನ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ.

**3.** ಬೆಂಬಲ ಯೋಜನೆಯಡಿ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ವಿಜಯನಗರ ಜಿಲ್ಲೆಯಲ್ಲಿ ತೊಗರಿ ಉತ್ಪನ್ನವನ್ನು ಪ್ರತಿ ಕ್ವಿಂಟಾಲ್‌ಗೆ **7** ಸಾವಿರದ **550** ರೂಪಾಯಿಯಂತೆ ಖರೀದಿ ಕೇಂದ್ರವನ್ನು ಆರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ತಿಳಿಸಿದ್ದಾರೆ.

**4.** ವಿಜಯಪುರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದಲ್ಲಿ ನಡೆದ **16**ನೆಯ ಘಟಿಕೋತ್ಸವದಲ್ಲಿ ಕುಲಪತಿ ಪ್ರೊ.ಬಿ.ಕೆ.ತುಳಸಿಮಾಲ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿರುವ ಮೂವರು ಸಾಧಕರಿಗೆ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಿದರು.

**5.** ಮಹಿಳಾ ಶಕ್ತಿಯನ್ನು ಸಬಲೀಕರಣಗೊಳಿಸುವ ಮೂಲಕ ಆರ್ಥಿಕವಾಗಿ ಪ್ರತಿಯೊಬ್ಬ ಮಹಿಳೆಯರು ಅಭಿವೃದ್ಧಿಯಾಗಬೇಕು ಎಂದು ಮೈಸೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಕೆ. ಎಂ. ಗಾಯತ್ರಿ ತಿಳಿಸಿದ್ದಾರೆ.

*********ಮುಕ್ತಾಯ********